# ಮಹಾಲಕ್ಷ್ಮೀ ಲೇಔಟ್ ಪೊಲೀಸರ ಕಾರ್ಯಾಚರಣೆ

# 18.60 ಕೋಟಿ ಮೌಲ್ಯದ ಹೈಡ್ರೋ ಗಾಂಜಾ ವಶ

**ಬೆಂಗಳೂರು,ಡಿ.4-ಉತ್ತರ ವಿಭಾಗದ ಮಹಾಲಕ್ಷ್ಮೀ ಲೇಔಟ್ ಠಾಣೆ ಪೊಲೀಸರು ಕಾರ್ಯಾಚರಣೆ ನಡೆಸಿ ಮಹಿಳೆ ಸೇರಿದಂತೆ ಇಬ್ಬರು ಡ್ರಗ್ ಪೆಡ್ಲರ್‌ಗಳನ್ನು ಬಂಧಿಸಿ 18.60 ಕೋಟಿ ಮೌಲ್ಯದ ಹೈಡ್ರೋ ಗಾಂಜಾವನ್ನು ವಶಪಡಿಸಿಕೊಂಡಿದ್ದಾರೆ.**




ಇಲ್ಲಿನ ರಾಣಿ ಅಬ್ಬಕ್ಕ ಆಟದ ಮೈದಾನದ ಹತ್ತಿರ ಇಬ್ಬರು ಮಾದಕ ವಸ್ತುವನ್ನು ಕಾರಿನಲ್ಲಿಟ್ಟುಕೊಂಡು ಮಾರಾಟ ಮಾಡುತ್ತಿದ್ದಾರೆಂಬ ಮಾಹಿತಿ ಪೊಲೀಸರಿಗೆ ಲಭಿಸಿದೆ.

ಖಚಿತ ಮಾಹಿತಿ ಮೇರೆಗೆ ಪೊಲೀಸರು ಸ್ಥಳದ ಮೇಲೆ ದಾಳಿ ಮಾಡಿ ಮಹಿಳೆ ಸೇರಿದಂತೆ ಇಬ್ಬರನ್ನು ಬಂಧಿಸಿ, 18 ಕೆಜಿ 590 ಗ್ರಾಂ ಹೈಡ್ರೋ ಗಾಂಜಾ, 2 ಮೊಬೈಲ್, ಕೃತ್ಯಕ್ಕೆ ಬಳಸಿದ ಕಾರು ವಶಪಡಿಸಿಕೊಳ್ಳುವಲ್ಲಿ ಇನ್‌ಸ್ಪೆಕ್ಟರ್ ಮಂಜು ಹಾಗೂ ಸಿಬ್ಬಂದಿ ತಂಡ ಯಶಸ್ವಿಯಾಗಿದ್ದು, ತನಿಖೆ ಮುಂದುವರೆದಿದೆ.

**ಆರ್‌ಎಂಸಿಯಾರ್ಡ್:**

ಲಾರಿ ಚಾಲಕರಿಗೆ ಮತ್ತು ಕೂಲಿ ಕಾರ್ಮಿಕರಿಗೆ ಮಾದಕ ವಸ್ತು ಮಾರಾಟ ಮಾಡುತ್ತಿದ್ದ ಆರೋಪಿಯೊಬ್ಬನನ್ನು ಆರ್ ಎಂಸಿಯಾರ್ಡ್ ಠಾಣೆ ಪೊಲೀಸರು ಬಂಧಿಸಿ, 8.35 ಲಕ್ಷ ಮೌಲ್ಯದ 8 ಕೆಜಿ 350 ಗ್ರಾಂ ಗಾಂಜಾ ವಶಪಡಿಸಿಕೊಂಡಿದ್ದಾರೆ.

ಮಹಾರಾಷ್ಟ್ರದಿಂದ ಕಡಿಮೆ ಬೆಲೆಗೆ ಗಾಂಜಾವನ್ನು ಅಪರಿಚಿತರಿಂದ ಖರೀದಿಸಿ ನಗರಕ್ಕೆ ತಂದು ಹೆಚ್ಚಿನ ಹಣ ಗಳಿಸುವ ಉದ್ದೇಶದಿಂದ ಲಾರಿ ಸ್ಟ್ಯಾಂಡ್‌ನಲ್ಲಿ ಮಾರಾಟ ಮಾಡುತ್ತಿದ್ದುದ್ದಾಗಿ ಆರೋಪಿಗಳು ಹೇಳಿದ್ದಾರೆ.

ಇನ್‌ಸ್ಪೆಕ್ಟರ್ ಹರೀಶ್ ಹಾಗೂ ಸಿಬ್ಬಂದಿ ತಂಡ ಪ್ರಕರಣ ವನ್ನು ಪತ್ತೆ ಮಾಡುವಲ್ಲಿ ಯಶಸ್ವಿಯಾಗಿದೆ.

**ಆರ್‌ಟಿನಗರ:**

ಕಾಲೇಜು ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಗಾಂಜಾ ಮಾರಾಟ ಮಾಡುತ್ತಿದ್ದ ಐದು ಮಂದಿಯನ್ನು ಆರ್‌ಟಿನಗರ ಠಾಣೆ ಪೊಲೀಸರು ಬಂಧಿಸಿ, 5.43 ಲಕ್ಷ ಮೌಲ್ಯದ 5 ಕೆಜಿ 437 ಗ್ರಾಂ ಗಾಂಜಾ ವಶಪಡಿಸಿಕೊಂಡಿದ್ದಾರೆ.

ದಿನ್ನೂರು ಮುಖ್ಯ ರಸ್ತೆಯ ಸುಲ್ತಾನ್‌ಪಾಳ್ಯದ ಪಾನಿಪುರಿ ಮೈದಾನದಲ್ಲಿ ಐದು ಮಂದಿ ಸೇರಿಕೊಂಡು ಬ್ಯಾಗ್‌ಗಳಲ್ಲಿ ಗಾಂಜಾ ಇಟ್ಟುಕೊಂಡು ಮಾರಾಟ ಮಾಡುತ್ತಿರುವ ಬಗ್ಗೆ ಖಚಿತ ಮಾಹಿತಿ ಮೇರೆಗೆ ಇನ್‌ಸ್ಪೆಕ್ಟರ್ ಚಿತ್ತರಂಜನ್ ಅವರು ಸಿಬ್ಬಂದಿಯೊಂದಿಗೆ ಸ್ಥಳದ ಮೇಲೆ ದಾಳಿ ಮಾಡಿ ಐದು ಮಂದಿಯನ್ನು ಬಂಧಿಸಿ, 2 ಬ್ಯಾಗ್‌ಗಳಲಿದ್ದ ಗಾಂಜಾ ವಶಪಡಿಸಿಕೊಂಡಿದ್ದಾರೆ.

**ಜೆಸಿನಗರ:ವಿದೇಶಿ ಪ್ರಜೆ ಬಂಧನ**

ಕೆನರಾ ಬ್ಯಾಂಕ್ ಬಳಿ ಮಾದಕ ವಸ್ತು ಮಾರಾಟ ಮಾಡಲಾಗುತ್ತಿದೆ ಎಂಬ ಖಚಿತ ಮಾಹಿತಿ ಮೇರೆಗೆ ಜೆಸಿನಗರ ಠಾಣೆ ಪೊಲೀಸರು ದಾಳಿ ಮಾಡಿ ವಿದೇಶಿ ಪ್ರಜೆಯನ್ನು ಬಂಧಿಸಿ, 1500 ರೂ. ನಗದು ಸೇರಿದಂತೆ 1.35 ಲಕ್ಷ ಮೌಲ್ಯದ 21 ಗ್ರಾಂ ಎಂಡಿಎಂಎ, ಮೊಬೈಲ್ ವಶಪಡಿಸಿಕೊಂಡಿದ್ದಾರೆ.

ಈ ವಿದೇಶಿ ಪ್ರಜೆ ಹೆಚ್ಚಿನ ಹಣ ಗಳಿಸುವ ಉದ್ದೇಶದಿಂದ ಗಿರಾಕಿಗಳಿಗೆ ಮಾದಕ ವಸ್ತು ಮಾರಾಟ ಮಾಡುತ್ತಿದ್ದುದ್ದು ಇನ್ ಸ್ಪೆಕ್ಟರ್ ಚೈತನ್ಯ ಹಾಗೂ ಸಿಬ್ಬಂದಿ ತಂಡ ಪತ್ತೆ ಹಚ್ಚಿದೆ.

**ಮಲ್ಲೇಶ್ವರಂ:**

ರೈಲ್ವೆ ಬ್ರಿಡ್ಜ್‌ನ ಮೆಟ್ಟಿಲುಗಳ ಮೇಲೆ ಮಾದಕ ವಸ್ತು ಮಾರಾಟ ಮಾಡುತ್ತಿದ್ದ ಆರೋಪಿಯೊಬ್ಬನನ್ನು ಮಲ್ಲೇಶ್ವರಂ ಠಾಣೆ ಪೊಲೀಸರು ಬಂಧಿಸಿ, 77,600 ರೂ. ಮೌಲ್ಯದ 772 ಗ್ರಾಂ ಗಾಂಜಾ ವಶಪಡಿಸಿಕೊಂಡಿದ್ದಾರೆ.

ಆರೋಪಿಯು ಕಡಿಮೆ ಬೆಲೆಗೆ ಅಪರಿಚಿತನಿಂದ ಗಾಂಜಾ ಖರೀದಿಸಿ ವಿದ್ಯಾರ್ಥಿಗಳಿಗೆ ಹಾಗೂ ಕೂಲಿ ಕಾರ್ಮಿಕರಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದನು. ಈ ಕಾರ್ಯಾಚರಣೆಯನ್ನು ಇನ್‌ಸ್ಪೆಕ್ಟರ್ ಹಾಗೂ ಸಿಬ್ಬಂದಿ ತಂಡ ಕೈಗೊಂಡು ವಿದೇಶಿ ಪ್ರಜೆಯನ್ನು ಬಂಧಿಸಿ, ಮಾಲನ್ನು ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದೆ.

# ಸ್ನೇಹಿತರಿಗೆ 35 ಲಕ್ಷ ರೂ. ವಂಚಿಸಿದ ಕಾನ್‌ಸ್ಟೆಬಲ್

**ಮೈಸೂರು,ಡಿ.4-** ಪೇಪರ್‌ಗ್ಲಾಸ್ ಹಾಗೂ ಜ್ಯೂಸ್ ತಯಾರಿಕಾ ಘಟಕ ಪ್ರಾರಂಭಿಸುವುದಾಗಿ ಪೊಲೀಸ್ ಕಾನ್ಸ್ ಸ್ಟೇಬಲ್‌ರೊಬ್ಬರು ಸ್ನೇಹಿತರಿಂದ 35 ಲಕ್ಷ ರೂ. ಹಣ ಪಡೆದು ವಂಚಿಸಿರುವ ಘಟನೆ ನಗರದಲ್ಲಿ ನಡೆದಿದೆ.

ಮೇಟಗಳ್ಳಿ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾನ್‌ಸ್ಟೇಬಲ್ ರಾಜು ಎಂಬುವವರ ವಿರುದ್ಧ ಕೃಷ್ಣರಾಜ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಪೇಪರ್ ಗ್ಲಾಸ್ ಹಾಗೂ ಜ್ಯೂಸ್ ಘಟಕ ತಯಾರಿಸುವುದಾಗಿ ತನಗೆ ಪರಿಚಯವಿದ್ದ ಮಹಿಳೆಯಿಗೆ ತಿಳಿಸಿದ್ದು, ಈ ಮಾತನ್ನು ನಂಬಿದ ಮಹಿಳೆ ತನಗೆ ಪರಿಚಯವಿದ್ದ ಸಿದ್ದೇಶ್ ದಂಪತಿಗೆ ರಾಜು ಅವರನ್ನು ಪರಿಚಯ ಮಾಡಿಕೊಟ್ಟಿದ್ದಾಳೆ. ಘಟಕಕ್ಕೆ ನಿಮ್ಮನ್ನು ಪಾಲುದಾರರನ್ನಾಗಿ ಮಾಡಿಕೊಳ್ಳುತ್ತೇನೆ ಎಂದು ದಂಪತಿಯಿಂದ 35 ಲಕ್ಷ ರೂ. ಹಣ ಪಡೆದಿದ್ದಾರೆ.

ನಂತರ ಇವರಿಗೆ ಹಣವನ್ನು ಹಿಂದಿರುಗಿಸಲಿಲ್ಲ. ಕೊಟ್ಟಿರುವ ಹಣವನ್ನು ವಾಪಸ್ ನೀಡಿ ಎಂದು ಕೇಳಲು ಹೋದ ಸಂದರ್ಭದಲ್ಲಿ ನೀವು ಹಣವನ್ನೇ ಕೊಟ್ಟಿಲ್ಲ ಎಂದು ಜೋರಾಗಿ ಮಾತನಾಡಿದ್ದಾರೆ. ನಂತರ ರಾಜು ವಿರುದ್ಧ ಕೃಷ್ಣರಾಜ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ.

# ನಿಂತಿದ್ದ ಟ್ರಕ್‌ಗೆ ಕಾರು ಡಿಕ್ಕಿ ನಾಲ್ವರು ಸಾವು

**ಅಮ್ರೋಹಾ ಡಿ.4-** ಉತ್ತರ ಪ್ರದೇಶದ ಅಮ್ರೋಹಾ ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿ-9 ರಲ್ಲಿ ರಸ್ತೆ ಪಕ್ಕ ನಿಂತಿದ್ದ ಟ್ರಕ್‌ಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ನಾಲ್ವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ರಾಜಬ್‌ಪುರ ಪೊಲೀಸ್ ಠಾಣೆ ವ್ಯಾಪ್ತಿಯ ರಸೂಲ್‌ಪುರ ಗ್ರಾಮದ ಬಳಿ ತಡರಾತ್ರಿ ಈ ಘಟನೆ ಸಂಭವಿಸಿದೆ.

ದೆಹಲಿಯಿಂದ ಅಮ್ರೋಹಾ ಕಡೆಗೆ ಬರುತ್ತಿದ್ದ ಕಾರು ನಿಯಂತ್ರಣ ತಪ್ಪಿ ನಿಂತಿದ್ದ ಟ್ರಕ್‌ಗೆ ಡಿಕ್ಕಿ ಹೊಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಕಾರಿನಲ್ಲಿದ್ದ ನಾಲ್ವರು ಪ್ರಯಾಣಿಕರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಅವರ ಗುರುತು ಇನ್ನೂ ಪತ್ತೆಯಾಗಿಲ್ಲ,ಶವಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಎಂದು ಅವರು ಹೇಳಿದರು.

ನಿದ್ದೆ ಮಂಪರಿನಲ್ಲಿ ಕಾರು ಚಾಲಕ ನಿಯಂತ್ರಣ ತಪ್ಪಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ ಘಟನೆಯಲ್ಲಿ ಕಾರು ಸಂಪೂರ್ಣ ಜಖಂಗೊಂಡಿದೆ.

# ಮಾದಕ ವಸ್ತು ದುರ್ಬಳಕೆ ವಿರುದ್ಧ ಜಾಗೃತಿಗಾಗಿ ರ್‍ಯಾಲಿ

**ಬೆಂಗಳೂರು,ಡಿ.4**-ಮಾದಕ ವಸ್ತುಗಳ ದುರುಪಯೋಗ ಮತ್ತು ಡ್ರಗ್ ಪೆಡ್ಲಿಂಗ್ ಯುವಕರಲ್ಲಿ ಹೆಚ್ಚುತ್ತಿರುವ ಕುರಿತು ಡಿ.7 ರಂದು ಜಾಗೃತಿ ಮೂಡಿಸುವ ಉದ್ದೇಶದಿಂದ ಕಾರು ಹಾಗೂ ಬೈಕ್‌ನಲ್ಲಿ ರ್‍ಯಾಲಿಯನ್ನು ನಗರ ಪೊಲೀಸ್ ಇಲಾಖೆ ಆಯೋಜಿಸಿದೆ.

ಯುವಕರುಗಳಲ್ಲಿ ಹೆಚ್ಚುತ್ತಿರುವ ಮಾದಕ ವಸ್ತು ದುರ್ಬಳಕೆ ರಾಜ್ಯದ ನಾಗರಿಕರಲ್ಲಿ, ವಿಶೇಷವಾಗಿ ನಗರದಲ್ಲಿ ಭಯ ಹಾಗೂ ಅಶಾಂತಿಯನ್ನು ಉಂಟು ಮಾಡಿದೆ

ಈ ರ್‍ಯಾಲಿಯ ಉದ್ದೇಶ ಸಾರ್ವಜನಿಕರಲ್ಲಿ ವಿಶೇಷವಾಗಿ ಯುವಕರಲ್ಲಿ ಹಾಗೂ ನಾಗರಿಕರಲ್ಲಿ ಮಾದಕ ವಸ್ತುಗಳ ಬಳಕೆಯಿಂದಾಗುವ ಹಾನಿಗಳು ಮತ್ತು ಡ್ರಗ್ ಸಾಗಣೆ ಜಾಲಗಳ ಅಪಾಯಗ ಬಗ್ಗೆ ಜಾಗೃತಿ ಮೂಡಿಸುವುದಾಗಿದೆ.

ಅಂದು ಬೆಳಗ್ಗೆ 9 ಗಂಟೆಗೆ ವಿಧಾನ ಸೌಧದ ಮೆಟ್ಟಿಲುಗಳ ಬಳಿ ಗೃಹ ಸಚಿವ ಡಾ.ಜಿ ಪರಮೇಶ್ವರ್ ಅವರು ರ್‍ಯಾಲಿಗೆ ಚಾಲನೆ ನೀಡಲಿದ್ದಾರೆ.

ರ್‍ಯಾಲಿಯಲ್ಲಿ 75ಕ್ಕೂ ಹೆಚ್ಚು ಕಾರುಗಳು ಮತ್ತು ಬೈಕ್‌ಗಳು ಭಾಗವಹಿಸಲಿದೆ.

ಅಂಬೇಡ್ಕರ್ ವೀದಿಯಿಂದ ರ್‍ಯಾಲಿ ಪ್ರಾರಂಭಗೊಂಡು ಕಬ್ಬನ್ ರಸ್ತೆ, ಎಂ.ಜಿ ರಸ್ತೆ, ಬ್ರಿಗೇಡ್ ರಸ್ತೆ, ವಿಠಲ್‌ಮಲ್ಯ ರಸ್ತೆ, ಮೈಸೂರು ರಸ್ತೆ ಮೂಲಕ ರಾಮನಗರ ಜಿಲ್ಲೆಯ ಬಿಗ್ ಬ್ಯಾನಿಯನ್ ರೆಸಾರ್ಟ್‌ನಲ್ಲಿ ಸಮಾಪ್ತಿಯಾಗಲಿದೆ.

ಸುರಕ್ಷಿತ, ಆರೋಗ್ಯಕರ ಮತ್ತು ಮಾದಕ ವಸ್ತು ಮುಕ್ತ ಸಮಾಜ ನಿರ್ಮಾಣದಲ್ಲಿ ನಾಗರಿಕರು ಸಹಕರಿಸುವಂತೆ ಪೊಲೀಸ್ ಇಲಾಖೆ ಮನವಿ ಮಾಡಿದೆ.

# ಅಂತಾರಾಷ್ಟ್ರೀಯ ಕರೆಗಳ ಪರಿವರ್ತನೆ ಜಾಲ ಭೇದಿಸಿದ ಸಿಸಿಬಿ ಪೊಲೀಸರು

**ಬೆಂಗಳೂರು, ಡಿ.4-** ಆಧುನಿಕ ಸಲಕರಣೆಗಳನ್ನು ಬಳಕೆ ಮಾಡಿಕೊಂಡು ಅಂತಾರಾಷ್ಟ್ರೀಯ ಕರೆಗಳನ್ನು ಸ್ಥಳೀಯ ಕರೆಗಳನ್ನಾಗಿ ಪರಿವರ್ತಿಸಿ ಟೆಲಿಕಾಂ ಸಂಸ್ಥೆಗೆ ಆರ್ಥಿಕ ನಷ್ಟ ಉಂಟು ಮಾಡುವ ಜೊತೆಗೆ, ರಾಷ್ಟ್ರೀಯ ಭದ್ರತೆಗೂ ಆತಂಕ ಸೃಷ್ಟಿಸಿದ ಮತ್ತು ವಿವಿಧ ಸೈಬರ್ ಅಪರಾಧಗಳಲ್ಲಿ ತೊಡಗಿಸಿಕೊಂಡಿದ್ದ ಕೇಂದ್ರ ಒಂದರ ಮೇಲೆ ಸಿಸಿಬಿ ಪೊಲೀಸರು ದಾಳಿ ಮಾಡಿದ್ದಾರೆ.




ಬೆಂಗಳೂರು ಇತ್ತೀಚೆಗೆ ಸೈಬರ್ ಅಪರಾಧಗಳ ತವರೂರಾಗಿ ಪರಿವರ್ತನೆಯಾಗುತ್ತಿದೆ. ಇಲ್ಲಿಯೇ ಕುಳಿತು ಅಮೆರಿಕಾದವರಿಗೆ ಡಿಜಿಟಲ್ ಅರೆಸ್ಟ್ ಮಾಡುವಂತಹ ಖತರ್‌ನಾಕ್ ಕೃತ್ಯಗಳು ಕೂಡ ಕಂಡು ಬಂದಿದ್ದವು. ಅಂತಾರಾಷ್ಟ್ರೀಯ ಕರೆಗಳನ್ನು ವಂಚಿಸುವುದು ಮತ್ತು ರಾಷ್ಟ್ರೀಯ ಭದ್ರತೆಗೆ ಆತಂಕ ಸೃಷ್ಟಿಸುವ ಚಾಳಿ ಮತ್ತೆ ಮುಂದುವರೆದಿದೆ.

ವೊಡಾಫೋನ್ ಲಿಮಿಟೆಡ್ ನ ನೋಂದಣಿ ಅಧಿಕಾರಿಯೊಬ್ಬರು ನವಂಬರ್ 28ರಂದು ಬೆಂಗಳೂರಿನ ಪೊಲೀಸ್ ಆಯುಕ್ತರ ಕಚೇರಿಯಲ್ಲಿರುವ ಸೈಬರ್ ಕ್ರೈಂ ಪೊಲೀಸ್ ಠಾಣೆಗೆ ದೂರು ನೀಡಿದ ಅನುಸಾರ ಕಾರ್ಯಾಚರಣೆ ನಡೆಸಲಾಗಿದೆ.

ನಗರದ ಎಲೆಕ್ಟ್ರಾನಿಕ್ ಸಿಟಿ ಫೇಸ್ -2ನಲ್ಲಿರುವ ನಾಯ್ಡು ಲೇಔಟ್, ಶಾಂತಿಪುರದ ದೇವರಾಜ ಬಿಲ್ಡಿಂಗ್ ನ ನಾಲ್ಕನೇ ಮಹಡಿಯಲ್ಲಿ ಇದ್ದ ಡೇಟಾ ಸೆಂಟರ್ ನಲ್ಲಿ ರಾಷ್ಟ್ರೀಯ ಭದ್ರತೆಗೆ ಧಕ್ಕೆಯುಂಟು ಮಾಡುವ ಕೃತ್ಯಗಳಾಗುತ್ತಿವೆ ಎಂದು ದೂರಿನಲ್ಲಿ ತಿಳಿಸಲಾಗಿತ್ತು. ಅಂತರಾಷ್ಟ್ರೀಯ ಕರೆಗಳನ್ನು ಅಕ್ರಮವಾಗಿ ಸ್ಥಳೀಯ ಕರೆಗಳನ್ನಾಗಿ ಪರಿವರ್ತಿಸುತ್ತಿರುವುದರಿಂದ ಟೆಲಿಕಾಂ ಸಂಸ್ಥೆಗೆ ಆರ್ಥಿಕ ನಷ್ಟವಾಗುತ್ತಿದೆ ಎಂದು ವಿವರಿಸಲಾಗಿತ್ತು.

ವಿವಿಧ ಆಯಾಮಗಳಲ್ಲಿ ತನಿಖೆ ನಡೆಸಿದ ಸಿಸಿಬಿ ಸೈಬರ್ ಕ್ರೈಂ ಪೊಲೀಸರು, ಸಿಮ್ ಬಾಕ್ಸ್‌ಗಳನ್ನು ಇರಿಸಿದ್ದ ಸ್ಥಳ ಪರಿಶೋಧನೆ ನಡೆಸಿದ್ದಾರೆ. ಸದರಿ ಮನೆಯಲ್ಲಿ 28 ಸಿಮ್ ಬಾಕ್ಸ್‌ಗಳು, ವಿವಿಧ ಕಂಪನಿಯ 1193 ಸಿಮ್ ಕಾರ್ಡ್‌ಗಳು, ಒಂದು ಲ್ಯಾಪ್‌ಟ್ಯಾಪ್ ಮೂರು ರೂಟರ್ಸ್, ಒಂದು ಎಂಐ ಪೋರ್ಟಬಲ್ ಸಿಸಿ ಕ್ಯಾಮೆರಾ ಹಾಗೂ ಇತರ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ. ಇವುಗಳ ಮೊತ್ತ ಸುಮಾರು 40 ಲಕ್ಷ ರೂಪಾಯಿಗಳಷ್ಟಾಗಿದೆ.

ಆರೋಪಿಗಳು ಸಿಮ್ ಕಾರ್ಡ್‌ಗಳನ್ನು ಇತರೆ ಸೈಬರ್ ಅಪರಾಧಗಳಿಗೆ ಬಳಸಿರುವ ಸಾಧ್ಯತೆ ಕಂಡು ಬಂದಿದೆ. ಸಿಮ್ ಬಾಕ್ಸ್‌ಗಳನ್ನು ಮತ್ತಿತರ ಅಪರಾಧಗಳಿಗೆ ಬಳಕೆ ಮಾಡಲಾಗಿದೆಯೇ ಎಂಬುದನ್ನು ಪರಿಶೀಲಿಸಲಾಗುತ್ತಿದೆ.

ಆರೋಪಿಗಳು ತಲೆಮರೆಸಿಕೊಂಡಿದ್ದು ಪತ್ತೆ ಕಾರ್ಯಚರಣೆ ಪ್ರಗತಿಯಲ್ಲಿದೆ. ಶಂಕಿತ ಆರೋಪಿ ಕೇರಳ ಮೂಲದವನಾಗಿದ್ದು ದುಬೈನಲ್ಲಿ ತಲೆ ಮರೆಸಿಕೊಂಡಿರುವ ಮಾಹಿತಿ ಇದೆ ಎಂದು ನಗರ ಪೊಲೀಸ್ ಕಮಿಷನರ್ ಸೀಮಂತ್ ಕುಮಾರ್ ಸಿಂಗ್ ಪತ್ರಿಕಾಗೋಷ್ಠಿಯಲ್ಲಿಂದು ತಿಳಿಸಿದರು. ಬೆಂಗಳೂರಿನ ಎಲ್ಲಾ ಡೆಟಾ ಸೆಂಟರ್‌ಗಳಲ್ಲಿ ಅಳವಡಿಸಲಾಗಿರುವ ಮೂಲ ಸೌಕರ್ಯಗಳನ್ನು ಸೂಕ್ತವಾಗಿ ಪರಿಶೀಲಿಸಿ ಅಕ್ರಮವಾಗಿ ಸಿಮ್ ಬಾಕ್ಸ್‌ಗಳು ಕಂಡು ಬಂದರೆ ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡುವಂತೆ ಅವರು ಈ ಸಂದರ್ಭದಲ್ಲಿ ಮನವಿ ಮಾಡಿದರು.

# ಬ್ಯಾಂಕಾಕ್‌ನಿಂದ ಬೆಂಗಳೂರಿಗೆ ಬಂತು ಹೈಡ್ರೋ ಗಾಂಜಾ



**ಬೆಂಗಳೂರು,ಡಿ.4-ಇದೇ ಪ್ರಥಮ ಬಾರಿಗೆ ನಗರ ಪೊಲೀಸರು 18.60 ಕೋಟಿ ಮೌಲ್ಯದ ಹೈಡ್ರೋ ಗಾಂಜಾವನ್ನು ಪತ್ತೆಹಚ್ಚಿ ವಶಪಡಿಸಿಕೊಂಡಿದ್ದಾರೆ ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಹೇಳಿದರು.**

**ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ವಿದೇಶಿ ಅಂಚೆ ಕಚೇರಿಗೆ ಕೊರಿಯರ್‌ನಲ್ಲಿ ಬಂದಿದ್ದ ಹೈಡ್ರೋ ಗಾಂಜಾವನ್ನು ವಶಪಡಿಸಿಕೊಳ್ಳಲಾಗಿತ್ತು. ಆದರೆ ಇದೇ ಮೊದಲ ಬಾರಿಗೆ ಏರ್‌ಪೋರ್ಟ್ ಮೂಲಕ ಕೊರಿಯರ್‌ನಲ್ಲಿ ಬಂದಿರುವ ಇಷ್ಟೊಂದು ಪ್ರಮಾಣದ ಹೈಡ್ರೋ ಗಾಂಜಾವನ್ನು ಪತ್ತೆಹಚ್ಚಿ ಮಹಿಳೆ ಸೇರಿ ಇಬ್ಬರು ಡ್ರಗ್ ಪೆಡ್ಲರ್‌ಗಳನ್ನು ಬಂಧಿಸಲಾಗಿದೆ ಎಂದು ಅವರು ತಿಳಿಸಿದರು.**

**ಈ ಹೈಡ್ರೋ ಗಾಂಜಾ ಬ್ಯಾಂಕಾಕ್ ನಿಂದ ಬಂದಿರುವ ಬಗ್ಗೆ ಮಾಹಿತಿ ಲಭ್ಯವಾಗಿದೆ. ಇದರಲ್ಲಿ ಹಲವರು ಶಾಮಿಲಾಗಿರುವ ಬಗ್ಗೆ ಮಾಹಿತಿ ಸಿಕ್ಕಿದೆ. ಅವರನ್ನು ಶೀಘ್ರದಲ್ಲಿ ಬಂಧಿಸುವುದಾಗಿ ಹೇಳಿದರು.**

**ಮಾದಕ ವಸ್ತು ಹೈಡ್ರೋ ಗಾಂಜಾವನ್ನು ಅನುಮಾನ ಬಾರದ ರೀತಿ ಕವರ್ ಮಾಡಿ ಪ್ಯಾಕಿಂಗ್ ಮಾಡಲಾಗಿತ್ತು. ಎಂದು ಅವರು ಮಾಹಿತಿ ನೀಡಿದರು.**

# ಬಸ್‌ಗೆ ಬೈಕ್ ಡಿಕ್ಕಿ:ಸವಾರ ಸಾವು

**ನೆಲಮಂಗಲ,ಡಿ.4-** ಮುಂದೆ ಹೋಗುತ್ತಿದ್ದ ಖಾಸಗಿ ಬಸ್‌ಗೆ ನಿಯಂತ್ರಣತಪ್ಪಿ ಬೈಕ್ ಹಿಂದಿನಿಂದ ಡಿಕ್ಕಿ ಹೊಡೆದ ಪರಿಣಾಮ ಸವಾರ ಮೃತಪಟ್ಟಿರುವ ಘಟನೆ ನೆಲಮಂಗಲ ಸಂಚಾರಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ನಾಗಸಂದ್ರದ ವಿದ್ಯಾನಗರ ನಿವಾಸಿ ಸುಮಂತ್‌ಗೌಡ (21) ಮೃತಪಟ್ಟ ಬೈಕ್ ಸವಾರ.

ಮಾದನಾಯಕನಹಳ್ಳಿ ಬಳಿ ಖಾಸಗಿ ಬಸ್ ಹೋಗುತ್ತಿದ್ದಾಗ ಇದರ ಹಿಂದೆ ಸುಮಂತ್‌ಗೌಡ ಬೈಕ್‌ನಲ್ಲಿ ಹೋಗುತ್ತಿದ್ದಾಗ ನಿಯಂತ್ರಣಕ್ಕೆ ಸಿಗದೆ ಬಸ್ ಹಿಂಬದಿ ಡಿಕ್ಕಿ ಹೊಡೆದ ಪರಿಣಾಮ ಗಂಭೀರ ಗಾಯಗೊಂಡು ಮೃತಪಟ್ಟಿದ್ದಾನೆ.

ಸುದ್ದಿ ತಿಳಿದು ನೆಲಮಂಗಲ ಸಂಚಾರಿ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ, ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

# ನಾಥನ್‌ಗೆ ಸ್ಥಾನವಿಲ್ಲ

**ಬ್ರಿಸ್ಬೇನ್, ಡಿ.4-** ನ್ಯೂಜಿಲೆಂಡ್ ವಿರುದ್ಧ ನಡೆಯುತ್ತಿರುವ ಆ್ಯಶಿಷ್ ಸರಣಿಯ 2ನೇ ಟೆಸ್ಟ್ ಪಂದ್ಯದಲ್ಲಿ ಆಸ್ಟ್ರೇಲಿಯಾದ ಖ್ಯಾತ ಸ್ಪಿನ್ನರ್ ನಾಥನ್ ಲಿಯಾನ್ ತಂಡದಲ್ಲಿ ಸ್ಥಾನ ಪಡೆಯಲು ವಿಫಲರಾಗಿದ್ದಾರೆ.



ಕೆಆರ್ ಪುರ ಕ್ಷೇತ್ರದ ಹೊರಮಾವು ಹಾಗೂ ಹೊರಮಾವು- ಅಗರ ಮುಖ್ಯರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ಬೈರತಿ ಬಸವರಾಜ ಅವರು ಚಾಲನೆ ನೀಡಿದರು. ವಾರ್ಡ್ ಅಧ್ಯಕ್ಷ ಸತೀಶ್, ಮುಖಂಡರಾದ ಹೊರಮಾವು ವಿಡಿಎಸ್ ಪ್ರದೀಪ್ , ಹೊರಮಾವು ವೆಂಕಿ , ಬಚ್ಚೇಗೌಡ , ಆನಂದ್ , ಗಂಧರ್ವ ರಮೇಶ್, ರಾಮಚಂದ್ರಪ್ಪ ಮತ್ತಿತರರು ಹಾಜರಿದ್ದರು.

**ಸಾರ್ವಜನಿಕ ಪ್ರಕಟಣೆ**

**ಕರ್ನಾಟಕದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಕುಂದಾಣ ಹೋಬಳಿಯ ಯರ್ರಪ್ಪನಹಳ್ಳಿ ಗ್ರಾಮದ ಸರ್ವೆ ಸಂಖ್ಯೆ 1 ರಿಂದ 10, 14 ರಿಂದ 20 ಮತ್ತು 22 ರಿಂದ 30 ಹಾಗೂ ಕಾರಹಳ್ಳಿ ಗ್ರಾಮದ ಸರ್ವೆ ಸಂಖ್ಯೆ 38/1, ಮತ್ತು 38/2 ಪ್ರಸ್ತಾಪಿಸಲಾದ "ಕಾಶಿ-ರಾ- ಪ್ರೀಮಿಯಂ ರೆಸಿಡೆನ್ಷಿಯಲ್ ವಿಲ್ಲಾ ಯೋಜನೆ"ಗಾಗಿ, 2006 ರ EIA ಅಧಿಸೂಚನೆಯ ಅಡಿಯಲ್ಲಿ, ರೋಸ್‌ಹುಡ್ ಎಸ್ಟೇಟ್ಸ್ LLP ಗೆ ಪರಿಸರ ಅನುಮೋದನೆ ಸಂಖ್ಯೆ SEIAA 01 CON 2025 ದಿನಾಂಕ 17/11/2025 ರಾಜ್ಯ ಪರಿಸರ ಪ್ರಭಾವದ ಮೌಲ್ಯಮಾಪನ ಪ್ರಾಧಿಕಾರ (SEIAA) ದಿಂದ ನೀಡಲಾಗಿದೆ.**

**ಪರಿಸರ ಅನುಮತಿಯ ಪ್ರತಿಯು https://parivesh.nic.in/ ನಲ್ಲಿ ಮತ್ತು https://kashi-ra.com/ ನಲ್ಲಿಯೂ ಲಭ್ಯವಿದೆ.**

**ಸಹಿ/-**
**ವ್ಯವಸ್ಥಾಪಕರು**

Ro.No.1245

# ನವವಿವಾಹಿತೆ ಆತ್ಮಹತ್ಯೆ

**ಬೆಂಗಳೂರು,ಡಿ.4**-ಪ್ರೀತಿಸಿ ಮದುವೆಯಾಗಿದ್ದ ನವ ವಿವಾಹಿತೆ ಮೂರೇ ತಿಂಗಳಿಗೆ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಅಂದ್ರಹಳ್ಳಿಯ ವಿದ್ಯಮಾನ್ಯ ನಗರದಲ್ಲಿ ನಡೆದಿದೆ

ಅಮೂಲ್ಯ (23) ಮೃತ ಮಹಿಳೆ.

ಅಮೂಲ್ಯ - ಅಭಿಷೇಕ್ ಪರಸ್ಪರ ಪ್ರೀತಿಸುತ್ತಿದ್ದರು ಆದರೆ ಇದಕ್ಕೆ ಇಬ್ಬರ ಮನೆಯವರ ವಿರೋಧವಿತ್ತು. ನಂತರದ ದಿನಗಳಲ್ಲಿ ಮಾತುಕತೆ ನಡೆಸಿ ಇಬ್ಬರ ಕುಟುಂಬದವರನ್ನ ಒಪ್ಪಿಸಿ ಮೂರು ತಿಂಗಳ ಹಿಂದಷ್ಟೇ ಮದುವೆ ಮಾಡಿಸಿದ್ದರು.

ದಾಂಪತ್ಯ ಜೀವನಕ್ಕೆ ಕಾಲಿಟ್ಟು ಮೂರು ತಿಂಗಳಲ್ಲಿ ಅಮೂಲ್ಯ ಗಂಡನ ಮನೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದು, ಅಮೂಲ್ಯ ಕುಟುಂಬಸ್ಥರು ಮಗಳ ಸಾವಿಗೆ ಪತಿ ಅಭಿಷೇಕ್ ಕಾರಣ ಎಂದು ಆರೋಪಿಸಿದ್ದಾರೆ. ಮಗಳು ಯಾರ ಜೊತೆಗೂ ಮಾತಾಡೋಕೆ ಬಿಡ್ತಾ ಇರಲಿಲ್ಲ. ಅಡುಗೆ ಮಾಡೋಕೆ ಬರಲ್ಲ ಅಂತಾ ಕಿರುಕುಳ ಕೊಡ್ತಾ ಇದ್ರು. ಅವ್ರೇ ಹೊಡೆದು ಕೊಲೆ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ.

ಬ್ಯಾಡರಹಳ್ಳಿ ಪೊಲೀಸರು ಸ್ಥಳಕ್ಕೆ ದಾವಿಸಿ ಪರಿಶೀಲನೆ ನಡೆಸಿದ್ದಾರೆ. ಪ್ರಸ್ತುತ ಪತಿ ಅಭಿಷೇಕ್‌ನನ್ನ ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ.

ಆತ್ಮಹತ್ಯೆಗೆ ನಿಖರ ಕಾರಣ ಸದ್ಯಕ್ಕೆ ತಿಳಿದು ಬಂದಿಲ್ಲ .ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಕಾರಿನಲ್ಲಿದ್ದ 11 ಲಕ್ಷ ಕಳವು ಮಾಡಿದ ಹೆಡ್‌ಕಾನ್‌ಸ್ಟೇಬಲ್!

**ಬೆಂಗಳೂರು,ಡಿ.4-** ಪೊಲೀಸ್ ಕಮಿಷನರ್ ಕಚೇರಿ ಆವರಣದಲ್ಲೇ ಹೆಡ್‌ಕಾನ್ ಸ್ಟೇಬಲ್‌ರೊಬ್ಬರು 11 ಲಕ್ಷ ಹಣ ಕಳವು ಮಾಡಿರುವ ಆರೋಪ ಕೇಳಿ ಬಂದಿದ್ದು, ಈ ಬಗ್ಗೆ ಹಿರಿಯ ಅಧಿಕಾರಿಗಳು ತನಿಖೆ ಕೈಗೊಂಡಿದ್ದಾರೆ.

ಸೈಬರ್ ಪ್ರಕರಣವೊಂದರಲ್ಲಿ ಆರೋಪಿಯೊಬ್ಬನನ್ನು ಪೊಲೀಸರು ಬಂಧಿಸಿದ್ದರು. ಆತ ಜಾಮೀನಿನ ಮೇಲೆ ಹೊರ ಬಂದ ನಂತರ ತನ್ನ ಕಾರಿನಲ್ಲಿ 11 ಲಕ್ಷ ಹಣವಿದ್ದ ಬ್ಯಾಗ್ ನಾಪತ್ತೆಯಾಗಿದೆ, ಅ ಹಣವನ್ನು ಯಾರೋ ಕಳ್ಳತನ ಮಾಡಿದ್ದಾರೆಂದು ಸೈಬರ್ ಕ್ರೈಂ ಪೊಲೀಸರಿಗೆ ತಿಳಿಸಿದ್ದಾರೆ.

ಈ ಬಗ್ಗೆ ಹಿರಿಯ ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ.

**PUBLIC NOTICE**

It is hereby notified that, my clients have agreed to purchase the Schedule property from its owner **SRI.KESHAVAN K TIRUVALLUR** S/o late T.V.Krishnamachari.

Apart from the said owner, if any other person/s have any manner of claim or interest or demand over the Schedule property or any part thereof by way of sale, lease, mortgage, gift, lien, charge, trust, maintenance, easement, pre-emption or otherwise howsoever, they are hereby requested to file their objection/s (along with the photocopies of the documents on which they are relying), with the undersigned within **14 days** from the date of publication of this notice. Objection/s received thereafter will not be binding on my clients.

**SCHEDULE**

All that piece and parcel of the residential property bearing Municipal No.39/1, PID No.51-10-39/1, New EPID No.9076834065, measuring East to West 60' 6" and North to South 68' 6", situated at Police Station Road, Basavanagudi, Bangalore and bounded on:

East by : Market Road;
West by : Property of Sri.Bheemasena;
North by : Private property;
South by : Property of Sri.T.K.Raghunath.

Sd/- **S.F. GOUTAM CHAND**,
Advocate,
**GOUTAM ASSOCIATES,**
No.60, 2nd Floor, Old Kanakapura Road, Basavanagudi, Bengaluru - 560004

Ro.No.1243

**ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ**

**ನಂ. 333/1, 1ನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.**

ಸಂ: ಬಿಐಎಎಪಿಎ/ಟಿಪಿ/ಭೂಉಬ/119/2025-26/2422 ದಿನಾಂಕ : 02.12.2025

**ಪ್ರಕಟಣೆ**

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14 (ಎ) ರ ಅಡಿಯಲ್ಲಿ ಈ ಕೆಳಕಂಡ ಅರ್ಜಿದಾರರು ವಸತಿ ಭೂಉಪಯೋಗ ವಲಯದಿಂದ ವಾಣಿಜ್ಯ ವಲಯಕ್ಕೆ ಭೂಉಪಯೋಗ ಬದಲಾವಣೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಭೂಉಪಯೋಗ ಬದಲಾವಣೆಯ ಪ್ರಸ್ತಾವನೆಯ ವಿವರಗಳು ಈ ಕೆಳಕಂಡಂತೆ ಇರುತ್ತದೆ. ಸದರಿ ಭೂಉಪಯೋಗ ಬದಲಾವಣೆ ಪ್ರಸ್ತಾವನೆ ಬಗ್ಗೆ ಯಾವುದೇ ಆಕ್ಷೇಪಣೆಗಳಿದ್ದರೆ, ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 15 ದಿವಸಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ ಸದಸ್ಯ ಕಾರ್ಯದರ್ಶಿಗಳು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ ಕಛೇರಿಗೆ ಸಲ್ಲಿಸಲು ತಿಳಿಸಲಾಗಿದೆ. ನಿಗಧಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

| ಕ್ರ. ಸಂ. | ಅರ್ಜಿದಾರರ ಹೆಸರು | ತಾಲ್ಲೂಕು | ಹೋಬಳಿ | ಗ್ರಾಮದ ವಿವರ | ಸರ್ವೆ ನಂ. | ವಿಸ್ತೀರ್ಣ ಎ-ಗು | ಮಹಾ ಯೋಜನೆಯ ಪ್ರಕಾರ ಭೂ ಉಪಯೋಗ | ಬದಲಾವಣೆ ಕೋರಿರುವ ಭೂ ಉಪಯೋಗ |
|---|---|---|---|---|---|---|---|---|
| 1. | ಶ್ರೀ ಪಿ. ನವೀನ್ ಕುಮಾರ್ ಬಿನ್ ಸಿ. ಪಿಳ್ಳವೆಂಕಟಶಾಮಪ್ಪ | ದೇವನಹಳ್ಳಿ | ವಿಜಯಪುರ | ಹಾರಡಿಪುರ | 43/31 | 0-5.08 | ವಸತಿ | ವಾಣಿಜ್ಯ |

**ಷರಾ :-** ಪ್ರಸ್ತಾವನೆಯಲ್ಲಿ ಅರ್ಜಿದಾರರು ಪ್ರಶ್ನಿತ ಜಮೀನನ್ನು ವಸತಿ ಉಪಯೋಗಕ್ಕೆ ಬಳಸಿಕೊಳ್ಳಲು ಸಾಧ್ಯವಾಗುತ್ತಿಲ್ಲ ಹಾಗೂ ಪರಿಸರದಲ್ಲಿ ವಾಣಿಜ್ಯ ಅಭಿವೃದ್ಧಿ ಬೆಳವಣಿಗೆಗಳು ಬರುತ್ತಿದ್ದು, ಈ ಜಮೀನಿನ ಪರಿಸರದಲ್ಲಿ **'ವಾಣಿಜ್ಯ'** ಉದ್ದೇಶಕ್ಕೆ ಸಾರ್ವಜನಿಕರಿಂದ ತುಂಬ ಬೇಡಿಕೆಯಿದ್ದು, ಭವಿಷ್ಯದಲ್ಲಿ **'ವಾಣಿಜ್ಯ'** ಉದ್ದೇಶಕ್ಕೆ ಹೆಚ್ಚಿನ ಬೇಡಿಕೆ ಬರುವುದರಿಂದ ಪ್ರಸ್ತಾಪಿತ ಪ್ರದೇಶದಲ್ಲಿ **'ವಾಣಿಜ್ಯ'** ಬೆಳವಣಿಗೆಗಳನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಿರುತ್ತೇವೆ. ಅಲ್ಲದೇ, ಪ್ರಸ್ತಾಪಿತ ಜಮೀನಿನಲ್ಲಿ **'ವಾಣಿಜ್ಯ'** ಬೆಳವಣಿಗೆ ಅಭಿವೃದ್ಧಿಪಡಿಸುವುದರಿಂದ ಸುತ್ತಮುತ್ತಲಿನ ಸಾರ್ವಜನಿಕರಿಗೆ ಉದ್ಯೋಗಾವಕಾಶ ಸೃಷ್ಟಿಯಾಗುವುದರಿಂದ ಸಾರ್ವಜನಿಕ ಹಿತಾಸಕ್ತಿ ಅಂಶ ಅಡಗಿದೆ ಎಂದು ತಿಳಿಸುತ್ತಾ ಸದರಿ ಜಮೀನನ್ನು **'ವಸತಿ ವಲಯ'** ದಿಂದ **'ವಾಣಿಜ್ಯ ವಲಯ'** ಕ್ಕೆ ಭೂಉಪಯೋಗ ಬದಲಾವಣೆ ಮಾಡಿಕೊಳ್ಳಲು ಇಚ್ಛಿಸಿರುವುದಾಗಿ ತಿಳಿಸಿರುತ್ತಾರೆ.

**ಸಹಿ/- ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಬಿ.ಐ.ಎ.ಎ.ಪಿ.ಎ, ದೇವನಹಳ್ಳಿ.**

ವಾ.ಸಾ.ಸಂ.ಇ/ವಾಪ್ರ/4189/2025-26

Ro.No.1241